All India Radio: Bangalore
National Bulletin In Kannada
09.03.2026  19.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಸಂಸತ್‌ನ ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ
- ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆ ತಗ್ಗಿಸಲು ಮಾತುಕತೆ, ರಾಜತಾಂತ್ರಿಕತೆ ಅನುಸರಿಸಬೇಕು - ಭಾರತ ಪ್ರತಿಪಾದನೆ
- ಕಚ್ಚಾ ತೈಲ ಬೆಲೆ ಏರಿಕೆ: ಜಿ-೭ ರಾಷ್ಟ್ರಗಳಿಂದ ಇಂದು ತುರ್ತು ಸಭೆ
- ಎಫ್‌ಐಹೆಚ್ ಮಹಿಳಾ ಹಾಕಿ ವಿಶ್ವಕಪ್: 'ಬಿ' ಗುಂಪಿನ ಪಂದ್ಯದಲ್ಲಿ ಭಾರತ-ಸ್ಕಾಟ್ಲೆಂಡ್ ಮುಖಾಮುಖಿ

***************

ಸಂಸತ್‌ನ ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಲಾಗಿದೆ.

ಪಶ್ಚಿಮ ಏಷ್ಯಾ ಪರಿಸ್ಥಿತಿಯ ಕುರಿತು ಚರ್ಚೆಗೆ ಒತ್ತಾಯಿಸಿ ವಿರೋಧ ಪಕ್ಷದ ಸದಸ್ಯರು ನಡೆಸಿದ ಪ್ರತಿಭಟನೆಯ ನಂತರ ಲೋಕಸಭೆಯನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

ಇದಕ್ಕೂ ಮುನ್ನ, ಮಧ್ಯಾಹ್ನ ೩ ಗಂಟೆಗೆ ಸದನ ಪುನಃ ಸಮಾವೇಶಗೊಂಡಾಗ, ಸ್ಪೀಕರ್ ಓಂ ಬಿರ್ಲಾ ಅವರನ್ನು ಪದಚ್ಯುತಗೊಳಿಸುವಂತೆ ಪೀಠಾಸೀನಾಧಿಕಾರಿ ಜಗದಾಂಬಿಕಾ ಪಾಲ್ ಅವರನ್ನು ಕಾಂಗ್ರೆಸ್ ಸಂಸದ ಮೊಹಮ್ಮದ್ ಜಾವೇದ್ ಕೋರಿದರು.

ಈ ವಿಷಯವಾಗಿ ವಿರೋಧ ಪಕ್ಷದ ಸದಸ್ಯರು ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಗಿಳಿದು, ಪ್ರತಿಭಟಿಸಿದರು. ಈ ವೇಳೆ ಪೀಠಾಸೀನಾಧಿಕಾರಿಗಳು ನಾಳೆ ಬೆಳಗ್ಗೆ ೧೧ ಗಂಟೆ ಕಲಾಪವನ್ನು ಮುಂದೂಡಿದರು.

ಇದಕ್ಕೂ ಮುನ್ನ ಐಸಿಸಿ ಪುರುಷರ ಟಿ೨೦ ವಿಶ್ವಕಪ್ ಗೆದ್ದ ಭಾರತೀಯ ಕ್ರಿಕೆಟ್ ತಂಡವನ್ನು ಅಭಿನಂದಿಸಲಾಯಿತು.

ರಾಜ್ಯಸಭೆಯಲ್ಲಿ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ಕಾರ್ಯವೈಖರಿಯ ಕುರಿತು ಚರ್ಚೆಯನ್ನು ಸದನವು ಕೈಗೆತ್ತಿಕೊಂಡಿತು.

ಚರ್ಚೆಯನ್ನು ಪ್ರಾರಂಭಿಸಿದ ಬಿಜೆಪಿಯ ಘನಶ್ಯಾಮ್ ತಿವಾರಿ, ಪ್ರಾಚೀನ ಕಾಲದಿಂದಲೂ ಭಾರತದ ಸಂಸ್ಕೃತಿ, ಪ್ರಕೃತಿ ಮತ್ತು ಪರಿಸರದೊಂದಿಗೆ ಬೆಸೆದುಕೊಂಡಿದೆ ಎಂದು ಹೇಳಿದರು.

ಅರಣ್ಯ ವ್ಯಾಪ್ತಿ ಹೆಚ್ಚಿಸುವುದು ಸೇರಿದಂತೆ ಪರಿಸರವನ್ನು ರಕ್ಷಿಸಲು ಸರ್ಕಾರ ತೆಗೆದುಕೊಂಡ ಪ್ರಯತ್ನಗಳನ್ನು ಅವರು ಶ್ಲಾಘಿಸಿದರು.

ಸರ್ಕಾರವು ನೀರಿನ ಭದ್ರತೆಯತ್ತ ಗಮನಹರಿಸಬೇಕು ಎಂದು ವೈಎಸ್ಆರ್‌ಸಿಪಿಯ ಅಯೋಧ್ಯಾ ರಾಮಿ ರೆಡ್ಡಿ ಒತ್ತಾಯಿಸಿದರು.

***************

ಹಣದುಬ್ಬರ ನಿಯಂತ್ರಿಸಲು ಮತ್ತು ಸಾಮಾನ್ಯ ನಾಗರಿಕರ ಮೇಲೆ ಅದರ ಪರಿಣಾಮವನ್ನು ತಗ್ಗಿಸಲು ಕೇಂದ್ರ ಸರ್ಕಾರ, ಹಣಕಾಸು ಮತ್ತು ವ್ಯಾಪಾರ ನೀತಿ ಸೇರಿದಂತೆ ಹಲವಾರು ಆಡಳಿತಾತ್ಮಕ ಕ್ರಮಗಳನ್ನು ಕೈಗೊಂಡಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಜಾಗತಿಕ ಕಚ್ಚಾ ತೈಲ ಬೆಲೆ ಏರಿಕೆಯಿಂದ, ಹಣದುಬ್ಬರದ ಮೇಲೆ ಉಂಟಾಗುವ ಮಧ್ಯಮಾವಧಿಯ ಪರಿಣಾಮ, ವಿನಿಮಯ ದರ, ಜಾಗತಿಕ ಬೇಡಿಕೆ ಮತ್ತು ಪೂರೈಕೆ ಪರಿಸ್ಥಿತಿ ಸೇರಿದಂತೆ ಹಲವಾರು ಅಂಶಗಳನ್ನು ಅವಲಂಬಿಸಿರುತ್ತದೆ ಎಂದು ಹೇಳಿದ್ದಾರೆ.

ಕಳೆದ ತಿಂಗಳು ೨೮ ರಂದು ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಪ್ರಾರಂಭವಾದಾಗಿನಿಂದ, ಜಾಗತಿಕ ಕಚ್ಚಾ ತೈಲ ದರ ಏರಿಕೆ ಹಾದಿಯಲ್ಲಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

***************

ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ಕೇಂದ್ರ ಸರ್ಕಾರ ಇಲ್ಲಿಯವರೆಗೆ ಬಡ ಕುಟುಂಬಗಳ ಮಹಿಳೆಯರಿಗೆ ೧೦ ಕೋಟಿ ೫೧ ಲಕ್ಷ ಎಲ್‌ಪಿಜಿ ಸಂಪರ್ಕಗಳನ್ನು ಒದಗಿಸಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ದೇಶಾದ್ಯಂತ ಮಹಿಳೆಯರಿಗೆ ಠೇವಣಿ ರಹಿತ ಎಲ್‌ಪಿಜಿ ಸಂಪರ್ಕ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ೨೦೧೬ರ ಮೇ ತಿಂಗಳಲ್ಲಿ ಪ್ರಾರಂಭಿಸಲಾಯಿತು. ಇದು ಸಾಂಪ್ರದಾಯಿಕ ಅಡುಗೆ ವಿಧಾನಗಳಲ್ಲಿ ಬದಲಾವಣೆಗೆ ಕಾರಣವಾಗಿದೆ. ಶುದ್ಧ ಇಂಧನ ಬಳಕೆಯು ಮನೆಯ ವಾಯುಮಾಲಿನ್ಯ ಕಡಿಮೆ ಮಾಡುತ್ತದೆ ಮತ್ತು ಉಸಿರಾಟಕ್ಕೆ ಸಂಬಂಧಿಸಿದಂತೆ ಆರೋಗ್ಯವನ್ನು ಸುಧಾರಿಸುತ್ತದೆ ಎಂದು ಹೇಳಿದರು.

ಈ ಯೋಜನೆಯಡಿ ವರ್ಷಕ್ಕೆ ೯ ಎಲ್‌ಪಿಜಿ ಸಿಲಿಂಡರ್‌ಗಳನ್ನು ನೀಡಲಾಗುತ್ತಿದ್ದು, ಪ್ರತಿ ಸಿಲಿಂಡರ್‌ಗೆ ೩೦೦ ರೂಪಾಯಿಗಳ ಸಬ್ಸಿಡಿಯನ್ನು ಸರ್ಕಾರ ನೀಡುತ್ತಿದೆ ಎಂದು ಸಚಿವ ಸುರೇಶ್ ಗೋಪಿ ಮಾಹಿತಿ ನೀಡಿದರು.

***************

ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆ ತಗ್ಗಿಸಲು ಮಾತುಕತೆ ಮತ್ತು ರಾಜತಾಂತ್ರಿಕತೆಯನ್ನು ಅನುಸರಿಸಬೇಕು ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿ ಕುರಿತು ಲೋಕಸಭೆಯಲ್ಲಿಂದು ಮಾತನಾಡಿದ ಅವರು, ಕಳೆದ ತಿಂಗಳ ೨೦ ರಂದು ಭಾರತ ಸರ್ಕಾರ ಅಲ್ಲಿನ ಪರಿಸ್ಥಿತಿ ಬಗ್ಗೆ ಕಳವಳ ವ್ಯಕ್ತಪಡಿಸಿ, ಎರಡೂ ಕಡೆಯವರು ಸಂಯಮದಿಂದ ವರ್ತಿಸುವಂತೆ ಒತ್ತಾಯಿಸಿತ್ತು. ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮಾತುಕತೆ ಮತ್ತು ರಾಜತಾಂತ್ರಿಕತೆಯನ್ನು ಮುಂದುವರೆಸಬೇಕು ಎಂಬುದು ಭಾರತದ ನಿಲುವಾಗಿದೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು, ಆ ಪ್ರದೇಶದ ಬೆಳವಣಿಗೆಗಳ ಕುರಿತು ನಿರಂತರವಾಗಿ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ತೀವ್ರಗೊಳ್ಳುತ್ತಿದ್ದು, ಅಲ್ಲಿನ ಭದ್ರತಾ ಪರಿಸ್ಥಿತಿ ಹದಗೆಟ್ಟಿದೆ. ಇತರ ದೇಶಗಳಿಗೂ ಸಂಘರ್ಷ ವಿಸ್ತರಿಸಿದೆ. ಇದು ಸಾಮಾನ್ಯ ಜನರ ಜೀವನದ ಮೇಲೆ ಪರಿಣಾಮ ಬೀರುತ್ತಿದೆ ಎಂದು ಅವರು ಹೇಳಿದರು.

ಗಲ್ಫ್ ರಾಷ್ಟ್ರಗಳಲ್ಲಿ ಒಂದು ಕೋಟಿಗೂ ಹೆಚ್ಚು ಭಾರತೀಯರು ಇದ್ದಾರೆ. ಅಧ್ಯಯನ ಮತ್ತು ಉದ್ಯೋಗಕ್ಕಾಗಿ ಇರಾನ್‌ನಲ್ಲಿಯೂ ಹಲವು ಭಾರತೀಯರಿದ್ದಾರೆ; ಭಾರತದ ಇಂಧನ ಭದ್ರತೆಗೆ ಈ ಪ್ರದೇಶ ಪ್ರಮುಖವಾದದ್ದು. ತೈಲ ಮತ್ತು ಅನಿಲದ ಪ್ರಮುಖ ಪೂರೈಕೆದಾರರನ್ನು ಈ ಪ್ರದೇಶ ಒಳಗೊಂಡಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ವಿವರಿಸಿದರು.

ಪರಿಸ್ಥಿತಿಯ ಮೇಲ್ವಿಚಾರಣೆ ಮಾಡಲು ಮತ್ತು ಸಹಾಯಕ್ಕಾಗಿ ಮೀಸಲಾದ ವಿಶೇಷ ನಿಯಂತ್ರಣ ಕೊಠಡಿಯನ್ನು ವಿದೇಶಾಂಗ ಸಚಿವಾಲಯ ಸ್ಥಾಪಿಸಿದೆ. ನಿನ್ನೆಯವರೆಗೆ ೬೭ ಸಾವಿರ ಭಾರತೀಯ ಪ್ರಜೆಗಳು ಸ್ವದೇಶಕ್ಕೆ ಮರಳಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

***************

ಇರಾನ್ ಜೊತೆಗಿನ ಅಮೆರಿಕ-ಇಸ್ರೇಲ್ ಸಂಘರ್ಷ ಹೆಚ್ಚುತ್ತಿರುವ ನಡುವೆ ಕಚ್ಚಾ ತೈಲ ಬ್ಯಾರೆಲ್‌ಗೆ ೧೦೦ ಅಮೆರಿಕನ್ ಡಾಲರ್‌ಗಳಿಗೂ ಹೆಚ್ಚು ಏರಿಕೆಯಾಗಿರುವುದರಿಂದ ಈ ಬಗ್ಗೆ ಚರ್ಚಿಸಲು ಜಿ-೭ ರಾಷ್ಟ್ರಗಳ ಗುಂಪು ಇಂದು ತುರ್ತು ಸಭೆ ನಡೆಸಲಿದೆ.

ಬ್ರಿಟನ್ ಚಾನ್ಸೆಲರ್ ರಾಚೆಲ್ ರೀವ್ಸ್ ಸೇರಿದಂತೆ ಜಿ-೭ ರಾಷ್ಟ್ರಗಳ ಹಣಕಾಸು ಸಚಿವರು, ಸಂಘರ್ಷದ ಆರ್ಥಿಕ ಪರಿಣಾಮವನ್ನು ಚರ್ಚಿಸಲು ಒಟ್ಟುಗೂಡಲಿದ್ದಾರೆ. ಹಾರ್ಮುಜ್ ಜಲಸಂಧಿಯ ಹಡಗು ಮಾರ್ಗದ ಮೂಲಕ ಇಂಧನ ಪೂರೈಕೆಯಲ್ಲಿ ದೀರ್ಘಕಾಲದ ಅಡಚಣೆ ಉಂಟಾಗಬಹುದೆಂಬ ಭಯದಿಂದಾಗಿ ಜಾಗತಿಕ ತೈಲ ಬೆಲೆಗಳು ಇಂದು ಬ್ಯಾರೆಲ್‌ಗೆ ಸುಮಾರು ೧೨೦ ಅಮೆರಿಕನ್ ಡಾಲರ್‌ಗಳಿಗೆ ತಲುಪಿದೆ.

ಜಿ-೭, ಕೆನಡಾ, ಫ್ರಾನ್ಸ್, ಜರ್ಮನಿ, ಇಟಲಿ, ಜಪಾನ್, ಬ್ರಿಟನ್ ಮತ್ತು ಅಮೆರಿಕ- ಜೊತೆಗೆ ಐರೋಪ್ಯ ಒಕ್ಕೂಟ ಸೇರಿದಂತೆ ಪ್ರಮುಖ ದೇಶಗಳ ಗುಂಪಾಗಿದೆ.

***************

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಇಂದು "ಸಬ್ಕಾ ಸಾಥ್ ಸಬ್ಕಾ ವಿಕಾಸ್ - ಜನರ ಆಕಾಂಕ್ಷೆಗಳನ್ನು ಪೂರೈಸುವುದು" ಎಂಬ ವಿಷಯದ ಕುರಿತು ಬಜೆಟ್ ನಂತರದ ವೆಬಿನಾರ್ ಸರಣಿ ನಡೆಸಿತು.

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ-ನಿಮ್ಹಾನ್ಸ್-೨ ಸ್ಥಾಪನೆ ಮತ್ತು ದೇಶಾದ್ಯಂತ ಪ್ರಮುಖ ಮಾನಸಿಕ ಆರೋಗ್ಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಮೂಲಕ ಮಾನಸಿಕ ಆರೋಗ್ಯ ಮೂಲಸೌಕರ್ಯವನ್ನು ಬಲಪಡಿಸುವತ್ತ ಗಮನಹರಿಸುವ ಕೇಂದ್ರ ಬಜೆಟ್ ಘೋಷಣೆಯ ಕುರಿತು ಚರ್ಚಿಸಲು ಈ ವೆಬಿನಾರ್ ಕರೆಯಲಾಗಿತ್ತು.

***************

ಅಮೆರಿಕಾ-ಇಸ್ರೇಲ್-ಇರಾನ್ ಸಂಘರ್ಷ ೧೦ನೇ ದಿನವೂ ಮುಂದುವರೆದಿದೆ. ಅಬುಧಾಬಿ ಮೇಲೆ ಇಂದು ಬೆಳಗಿನ ಜಾವ ಇರಾನ್, ಕ್ಷಿಪಣಿ ಮತ್ತು ಡ್ರೋನ್ ದಾಳಿ ನಡೆಸಿತು. ಆದರೆ, ತಮ್ಮಲ್ಲಿರುವ ವಾಯು ರಕ್ಷಣಾ ವ್ಯವಸ್ಥೆಗಳು ಇರಾನ್‌ನ ಹಲವು ಕ್ಷಿಪಣಿ ಮತ್ತು ಡ್ರೋನ್‌ಗಳನ್ನು ನಿಗ್ರಹಿಸಿತು ಎಂದು ಯುಎಇ ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ವೇಳೆ, ಫುಝೈರಾದಲ್ಲಿ ಫೌಜ್ ತೈಲ ಪ್ರದೇಶದ ಮೇಲೆ ದಾಳಿ ನಡೆಸಲು ಇರಾನ್ ಯತ್ನಿಸಿತು. ಆದರೆ, ವೈಮಾನಿಕ ಬೆದರಿಕೆಗಳನ್ನು ಯಶಸ್ವಿಯಾಗಿ ನಿಗ್ರಹಿಸಲಾಗಿದೆ ಎಂದು ಯುಎಇ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

***************

ಇರಾನ್‌ನ ನೂತನ ನಾಯಕರಾಗಿ ನೇಮಕಗೊಂಡ ಮೊಜ್ತಬಾ ಖಮೇನಿ ಅವರನ್ನು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಇಂದು ಅಭಿನಂದಿಸಿದ್ದಾರೆ. ಅಮೆರಿಕಾ-ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದ ನಡುವೆಯೂ ಇರಾನ್‌ಗೆ ರಷ್ಯಾ ಅಚಲ ಬೆಂಬಲ ನೀಡುತ್ತದೆ ಎಂದು ಅವರು ಭರವಸೆ ನೀಡಿದ್ದಾರೆ.

ಇರಾನ್‌ನ ಪರಮೋಚ್ಛ ನಾಯಕ ದಿವಂಗತ ಅಯತೊಲ್ಲಾ ಅಲಿ ಖಮೇನಿ ಅವರ ಉತ್ತರಾಧಿಕಾರಿಯಾಗಿ ಅವರ ಪುತ್ರ ೫೬ ವರ್ಷದ ಮೊಜ್ತಬಾ ಖಮೇನಿ ಅವರನ್ನು ನೇಮಿಸಲಾಗಿದೆ ಎಂದು ಇರಾನ್ ನಿನ್ನೆ ಘೋಷಿಸಿತು.

ಇನ್ನೊಂದೆಡೆ, ಇರಾನ್‌ನ ಮುಂದಿನ ಸರ್ವೋಚ್ಚ ನಾಯಕನನ್ನು ಸಹ ಗುರಿಯಾಗಿಸಿ ದಾಳಿ ನಡೆಸಲಾಗುವುದು ಎಂದು ಇಸ್ರೇಲ್ ಎಚ್ಚರಿಕೆ ನೀಡಿದೆ.

***************

ಹೈದರಾಬಾದ್‌ನಲ್ಲಿ ನಡೆಯುತ್ತಿರುವ ೨೦೨೬ರ ಎಫ್‌ಐಹೆಚ್ ಮಹಿಳಾ ಹಾಕಿ ವಿಶ್ವಕಪ್ ಅರ್ಹತಾ ಸುತ್ತಿನ ಪಂದ್ಯಾವಳಿಯ 'ಬಿ' ಗುಂಪಿನ ಪಂದ್ಯದಲ್ಲಿ ಭಾರತ ಮತ್ತು ಸ್ಕಾಟ್ಲೆಂಡ್ ಮಹಿಳಾ ತಂಡಗಳು ಮುಖಾಮುಖಿಯಾಗಿವೆ. ಪಂದ್ಯ ಪ್ರಗತಿಯಲ್ಲಿದೆ.

***************

ಮಧ್ಯಪ್ರದೇಶದ ಕುನೋ ರಾಷ್ಟ್ರೀಯ ಉದ್ಯಾನವನದಲ್ಲಿ ಹೆಣ್ಣು ಚಿರತೆ 'ಜ್ವಾಲಾ' ಐದು ಮರಿಗಳಿಗೆ ಜನ್ಮ ನೀಡಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ಸಚಿವ ಭೂಪೇಂದ್ರ ಯಾದವ್ ತಿಳಿಸಿದ್ದಾರೆ.

ಈ ಮರಿಗಳ ಜನನದೊಂದಿಗೆ ಭಾರತದಲ್ಲಿ ಜನಿಸಿದ ನಮೀಬಿಯಾ ಚಿರತೆ ಮರಿಗಳ ಸಂಖ್ಯೆ ೩೩ಕ್ಕೆ ಏರಿಕೆಯಾಗಿದೆ. ಅಲ್ಲದೇ, ಭಾರತದಲ್ಲಿ ಒಟ್ಟು ನಮೀಬಿಯಾ ಚಿರತೆಗಳ ಸಂಖ್ಯೆ ಈಗ ೫೩ಕ್ಕೆ ತಲುಪಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಭೂಪೇಂದ್ರ ಯಾದವ್ ಮಾಹಿತಿ ನೀಡಿದ್ದಾರೆ.

***************

ಜಾರ್ಖಂಡ್‌ನ ಗಿರಿದಿಹ್ ಜಿಲ್ಲೆ ಬೆಂಗಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯ ಪ್ರದೇಶದಲ್ಲಿ ಬಿಹಾರ ವಿಶೇಷ ಕಾರ್ಯಪಡೆ ಮತ್ತು ಸ್ಥಳೀಯ ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಇಬ್ಬರು ಮಾವೋವಾದಿಗಳನ್ನು ಬಂಧಿಸಲಾಗಿದೆ.

ಬಂಧಿತ ಆರೋಪಿಗಳನ್ನು ಪಂಕಜ್ ಯಾದವ್ ಮತ್ತು ಪವನ್ ಸಿಂಗ್ ಎಂದು ಗುರುತಿಸಲಾಗಿದೆ.

ಈ ಆರೋಪಿಗಳು ಹಲವು ಪ್ರಕರಣಗಳಲ್ಲಿ ಭಾಗಿಯಾಗಿದ್ದು, ದೀರ್ಘಕಾಲದಿಂದ ತಲೆಮರೆಸಿಕೊಂಡಿದ್ದರು.

***************

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೧ ಸಾವಿರದ ೩೫೩ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೭ ಸಾವಿರದ ೫೬೬ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೪೨೨ ಅಂಕಗಳು ಇಳಿಕೆ ಕಂಡು, ದಿನದ ಅಂತ್ಯಕ್ಕೆ ೨೪ ಸಾವಿರದ ೨೮ ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೯೨ ರೂಪಾಯಿ ೩೩ ಪೈಸೆಯಷ್ಟಾಗಿದೆ.

********ಮುಕ್ತಾಯ*******